**ಕರ್ನಾಟಕ ವಿಧಾನ ಪರಿಷತ್ತು**

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1760 (1928) |
| ಸದಸ್ಯರ ಹೆಸರು | : | ಶ್ರೀ ರಾಜೇಂದ್ರ ರಾಜಣ್ಣ<br>(ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 24.03.2026 |
| ಉತ್ತರಿಸಬೇಕಾದ ಸಚಿವರು | : | ನಗರಾಭಿವೃದ್ಧಿ ಮತ್ತು ನಗರ ಯೋಜನ ಸಚಿವರು. |

| ಪ್ರಶ್ನೆ | | ಉತ್ತರ |
|---|---|---|
| ಅ) | ತುಮಕೂರು ಮಹಾನಗರ ಪಾಲಿಕೆಯಲ್ಲಿ ಇ-ಆಸ್ತಿಗೆ ಸಲ್ಲಿಸಿರುವ ಅರ್ಜಿಗಳ ಸಂಖ್ಯೆ ಎಷ್ಟು; | ತುಮಕೂರು ಮಹಾನಗರ ಪಾಲಿಕೆಯಲ್ಲಿ ಇ-ಆಸ್ತಿ ತಂತ್ರಾಂಶದಲ್ಲಿ ಖಾತಾ ಕೋರಿ ಸ್ವೀಕೃತವಾದ ಅರ್ಜಿಗಳ ಸಂಖ್ಯೆ: 51,117. |
| ಆ) | ತುಮಕೂರು ಮಹಾನಗರ ಪಾಲಿಕೆಯಲ್ಲಿ ಸಾರ್ವಜನಿಕರು ಇ-ಆಸ್ತಿಗೆ ಅರ್ಜಿ ಸಲ್ಲಿಸಿ ನಿಗಧಿತ ಅವಧಿಯೊಳಗೆ ಇ-ಆಸ್ತಿ ಪಡೆಯಲು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ನವೆಂಬರ್ ಮತ್ತು ಡಿಸೆಂಬರ್ ತಿಂಗಳಲ್ಲಿ ಇ-ಆಸ್ತಿ ತಂತ್ರಾಂಶದ ಸರ್ವರ್ ಸಮಸ್ಯೆಯಿಂದ ವಿಳಂಬವಾಗಿದ್ದು, ಪ್ರಸ್ತುತ ಸರ್ವರ್ ಸಮಸ್ಯೆಯನ್ನು ಬಗೆಹರಿಸಲಾಗಿರುತ್ತದೆ. |
| ಇ) | ಬಂದಿದ್ದಲ್ಲಿ, ತುಮಕೂರು ಮಹಾನಗರ ಪಾಲಿಕೆಯಲ್ಲಿ ಇ-ಆಸ್ತಿ ಅರ್ಜಿ ಸಲ್ಲಿಸಿದ ಸಾರ್ವಜನಿಕರಿಗೆ ನಿಗಧಿತ ಅವಧಿಯೊಳಗೆ ಇ-ಆಸ್ತಿ ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು? | ಇ-ಖಾತಾ ಕೋರಿ ಸ್ವೀಕೃತವಾಗುವ ಅರ್ಜಿಗಳನ್ನು 07 ದಿನಗಳ ಒಳಗಾಗಿ ವಿಲೇಪಡಿಸಲು ಸೂಚಿಸಲಾಗಿದೆ. ಈ ಕುರಿತು ಪೌರಾಡಳಿತ ನಿರ್ದೇಶನಾಲಯದಿಂದ ದಿನಾಂಕ: 14-05-2025 ರಂದು ಸುತ್ತೋಲೆ ಹೊರಡಿಸಲಾಗಿರುತ್ತದೆ.<br><br>ತುಮಕೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿರುವ ಆಸ್ತಿಗಳ ಕರಡು ಇ-ಖಾತಾ ಸೃಜಿಸಿ ಪಾಲಿಕೆ ಇ-ಆಸ್ತಿ ತಂತ್ರಾಂಶದಲ್ಲಿ ಪ್ರಚುರಪಡಿಸಲಾಗಿದೆ. ಆಸ್ತಿ ಮಾಲೀಕರು ತಮ್ಮ ಸ್ವತ್ತಿನ ಸಂಖ್ಯೆ ಅಥವಾ ಮಾಲೀಕರ ಹೆಸರು ದಾಖಲಿಸಿ ವಿವರಗಳನ್ನು ಪರಿಶೀಲಿಸಿ, ಅಂತಿಮ ಖಾತಾ ಪಡೆಯಲು ಅವಕಾಶ ಕಲ್ಪಿಸಿದೆ.<br><br>ಕರಡು ಖಾತಾದಿಂದ ಅಂತಿಮ ಖಾತಾ ಕೋರಿ ಸ್ವೀಕೃತವಾಗುವ ಅರ್ಜಿಗಳನ್ನು ಪಾಲಿಕೆಯ ಒಬ್ಬ ಅಧಿಕಾರಿ ಅಥವಾ ಸಿಬ್ಬಂದಿ ಪರಿಶೀಲಿಸಿ ಅನುಮೋದನೆಗೆ ಸಲ್ಲಿಸುವಂತೆ ತಂತ್ರಾಂಶದಲ್ಲಿ ಬದಲಾವಣೆ ಮಾಡಲಾಗಿದೆ.<br><br>ತುಮಕೂರು ಮಹಾನಗರ ಪಾಲಿಕೆಯಿಂದ ಖಾತಾ ಆಂದೋಲನ ಮಾಡಿ ಖಾತಾ ನೀಡಲಾಗುತ್ತಿದೆ. |

**ಸಂಖ್ಯೆ: ನಅಇ 28 ತುಮಪಾ 2026 (ಇ)**

**(ಬಿ.ಎಸ್. ಸುರೇಶ)**
ನಗರಾಭಿವೃದ್ಧಿ ಹಾಗೂ ನಗರ
ಯೋಜನಾ ಸಚಿವರು